ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಚಿವ ಸಂಪುಟ (ಕೇಂದ್ರ)

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ

ದಿನಾಂಕ : DATE : 27/2/2020

# ಬಾಡಿಗೆ ತಾಯ್ತನ (ನಿಯಂತ್ರಣ) ಮಸೂದೆಗೆ ಸಂಪುಟ ಒಪ್ಪಿಗೆ

ನವದೆಹಲಿ (ಪಿಟಿಐ): ರಾಜ್ಯಸಭೆ ಆಯ್ಕೆ ಸಮಿತಿ ಮಾಡಿದ್ದ ಪ್ರಮುಖ ಶಿಫಾರಸುಗಳನ್ನು ಅಳವಡಿಸಿದ ನಂತರ, ಬಾಡಿಗೆ ತಾಯ್ತನ (ನಿಯಂತ್ರಣ) ಮಸೂದೆಗೆ ಕೇಂದ್ರ ಸಚಿವ ಸಂಪುಟ ಬುಧವಾರ ಅನುಮೋದನೆ ನೀಡಿದೆ.

'ಈ ಮೊದಲು, ಮಹಿಳೆಯ ಹತ್ತಿರದ ಬಂಧು ಮಾತ್ರ ಬಾಡಿಗೆ ತಾಯಿಯಾಗಲು ಅವಕಾಶ ಇತ್ತು. ಆದರೆ, ಬಾಡಿಗೆ ತಾಯಿಯಾಗಲು ಇಚ್ಛೆ ವ್ಯಕ್ತಪಡಿಸುವ ಯಾವುದೇ ಮಹಿಳೆಗೆ ಸಹ ಅನುಮತಿ ನೀಡಬೇಕು ಎಂಬುದಾಗಿ ಸಂಸದೀಯ ಸಮಿತಿಯು ಶಿಫಾರಸು ಮಾಡಿತ್ತು. ಈ ಅಂಶವನ್ನು ಪರಿಷ್ಕೃತ ಮಸೂದೆಯಲ್ಲಿ ಸೇರಿಸಿದ್ದು ವಿಧವೆಯರು ಮತ್ತು ವಿಚ್ಛೇದನ ಪಡೆದ ಮಹಿಳೆಯರು ಕೂಡ ಇದರ ಲಾಭ ಪಡೆಯಬಹುದು' ಎಂದು ಕೇಂದ್ರ ಸಚಿವ ಪ್ರಕಾಶ್ ಜಾವಡೇಕರ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ರಾಜ್ಯಸಭಾದ 23 ಸದಸ್ಯರಿರುವ ಸಮಿತಿಯು 15 ಪ್ರಮುಖ ಬದಲಾವಣೆಗಳನ್ನು ಶಿಫಾರಸು ಮಾಡಿದೆ. ಅವುಗಳನ್ನೂ ಮಸೂದೆಯಲ್ಲಿ ಸೇರ್ಪಡೆ ಮಾಡಲಾಗಿದೆ ಎಂದು ತಿಳಿಸಿದರು.

**ರಾಷ್ಟ್ರೀಯ ಜವಳಿ ಮಿಷನ್:** ರಾಷ್ಟ್ರೀಯ ತಾಂತ್ರಿಕ ಜವಳಿ ಮಿಷನ್ ಸ್ಥಾಪನೆಗೆ ಅನುಮೋದನೆ ನೀಡಲಾಗಿದ್ದು, ಒಟ್ಟು 1,480 ಕೋಟಿ ಬಂಡವಾಳ ಹೂಡಿಕೆಗೆ ಮುಂದಾಗಿದೆ.

ಪ್ರಧಾನಿ ನರೇಂದ್ರ ಮೋದಿ ಅವರ ಅಧ್ಯಕ್ಷತೆಯಲ್ಲಿ ನಡೆದ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಒಟ್ಟು ನಾಲ್ಕು ವರ್ಷಗಳ ಅನುಷ್ಠಾನದ ಅವಧಿಯನ್ನು (2021ರಿಂದ 2024ರವರೆಗೆ) ಮಿಷನ್ ಹೊಂದಿದೆ.